# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1198 (1490)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕಾಂತ್‌ರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ ನಿರ್ವಹಣೆ ಬಗ್ಗೆ

(ಅ) ಬೆಂಗಳೂರಿನಿಂದ ತುಮಕೂರಿಗೆ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ ಯಾವುದು ; ಅದು ಎಷ್ಟು ಕಿ.ಮೀ. ಇದೆ ; ಏಕ ಪಥ ರಸ್ತೆಯಿಂದ ಯಾವಾಗ ಚತುಷ್ಪಥ ರಸ್ತೆಯನ್ನಾಗಿ ನಿರ್ಮಿಸಲಾಯಿತು ;

(ಆ) ಈ ಹೆದ್ದಾರಿಯನ್ನು ನಿರ್ಮಾಣ ಮಾಡಿ ನಿರ್ವಹಣೆ ಮಾಡುತ್ತಿರುವ ಸಂಸ್ಥೆಗಳು ಯಾವುವು ; (ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ಈ ಸಂಸ್ಥೆಗಳಿಗೆ ಯಾವ ದಿನಾಂಕದಿಂದ ಯಾವ ರೀತಿ ಕರಾರು ಮಾಡಿಕೊಳ್ಳಲಾಗಿದೆ ; ಕರಾರಿನಲ್ಲಿರುವ ನಿಯಮಗಳಂತೆ ಈ ಸಂಸ್ಥೆಗಳು ರಸ್ತೆಯನ್ನು ನಿರ್ಮಾಣ ಮಾಡಿ ನಿರ್ವಹಣೆ ಮಾಡುತ್ತಿವೆಯೇ ; (ವಿವರವಾದ ಕರಾರಿನ ಪ್ರತಿಯೊಂದಿಗೆ ಮಾಹಿತಿ ನೀಡುವುದು)

(ಈ) ಈ ಸಂಸ್ಥೆಗಳ ನಿರ್ವಹಣಾ ಅವಧಿ ಯಾವಾಗ ಮುಕ್ತಾಯವಾಗುತ್ತಿದೆ; ಟ್ರಕ್ ವೇ-ಬೇ, ಸರ್ವೀಸ್ ರಸ್ತೆ, ಹಾಗೂ ಇತರೆಗಳನ್ನು ನಿರ್ಮಾಣ ಮಾಡಲಾಗಿದೆಯೇ ;

(ಉ) ಟೋಲ್‌ಗಳಲ್ಲಿ ವಿ.ಐ.ಪಿ. ಮತ್ತು ಆಂಬುಲೆನ್ಸ್ ವಾಹನಗಳು ಸರಾಗವಾಗಿ ಸಂಚರಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?